# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೨೩೫೮೪, ೨೬೬೧೨೯೯೧ ಫ್ಯಾಕ್ಸ್ : ೨೬೫೨೩೮೬೭
http://www.kasapa.in e-mail : kannadaparishattu@gmail.com

---

ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ**/ ೨೦೨೨-೨೩ ದಿನಾಂಕ : ೨೧-೧೦-೨೦೨೨

*ಇವರಿಗೆ*
**ಸಂಪಾದಕರು / ಮುಖ್ಯ ವರದಿಗಾರರು**
..................................................ಬೆಂಗಳೂರು

ಪ್ರಕಟಣೆಯ ಕೃಪೆಗಾಗಿ

## ಕನ್ನಡ ಸಾಹಿತ್ಯ ಪರಿಷತ್ತಿನ ಪ್ರಶಸ್ತಿ ಪಡೆಯಲು ಅರ್ಜಿಯೂ ಬೇಡ, ಮರ್ಜಿಯೂ ಬೇಡ – ನಾಡೋಜ ಡಾ. ಮಹೇಶ ಜೋಶಿ

ಬೆಂಗಳೂರು: ಕನ್ನಡ ಸಾಹಿತ್ಯ ಪರಿಷತ್ತಿನ ಮೇಲೆ ಜನರ ಸಂಪೂರ್ಣ ವಿಶ್ವಾಸ ನಂಬಿಕೆ ಇದೆ ಎನ್ನುವುದಕ್ಕೆ ಸಾಕ್ಷಿ ಪರಿಷತ್ತಿನಲ್ಲಿ ಬರೋಬ್ಬರಿ ೨೦೬೧ ದತ್ತಿ ಪ್ರಶಸ್ತಿಗಳನ್ನು ಇಟ್ಟಿರುತ್ತಾರೆ. ರಾಜ್ಯದ ಬೇರೆ ಯಾವ ಸಂಸ್ಥೆಗಳಲ್ಲಿಯೂ ಇಷ್ಟೊಂದು ದತ್ತಿಗಳನ್ನು ಇಟ್ಟಿರುವುದಿಲ್ಲ. ಇದು ಮುಖ್ಯವಾಗಿ ಪರಿಷತ್ತಿನ ವಿಶ್ವಾಸಾರ್ಹತೆ ಎತ್ತಿತೋರಿಸುತ್ತದೆ. ಗಮನಿಸ ಬೇಕಾದ ಸಂಗತಿ ಎಂದರೆ ಇಲ್ಲಿ ಪ್ರಶಸ್ತಿಗಳನ್ನು ಪಡೆಯುವುದಕ್ಕೆ ಯಾರೂ ಅರ್ಜಿ ಹಾಕುವುದಿಲ್ಲ, ಯಾರ ಮರ್ಜಿಯನ್ನೂ ಕಾಯುವುದಿಲ್ಲ, ಸಾಧಕರನ್ನು ಗುರುತಿಸುತ್ತದೆಯೇ ಹೊರತು ಸಮಯ ಸಾಧಕರನ್ನಲ್ಲ ಎಂದು ನಾಡೋಜ ಡಾ. ಮಹೇಶ ಜೋಶಿ ಅಭಿಪ್ರಾಯ ಪಟ್ಟರು.

ಕನ್ನಡ ಸಾಹಿತ್ಯ ಪರಿಷತ್ತು, ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀ ಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ಹಮ್ಮಿಕೊಂಡ **'ಚಾವುಂಡರಾಯ ದತ್ತಿ', 'ನಾಗಡಿಕೆರೆ ಕಿಟ್ಟಪ್ಪಗೌಡ ರುಕ್ಮಿಣಿ ತಿರ್ಥಹಳ್ಳಿ ದತ್ತಿ'** ಹಾಗೂ **'ಕನ್ನಡ ಕಾಯಕ ದತ್ತಿ'** ಪ್ರಶಸ್ತಿ ಪ್ರದಾನ ಸಮಾರಂಭದ ಅಧ್ಯಕ್ಷತೆವಹಿಸಿ ಮಾತನಾಡಿದರು. ಕನ್ನಡದ ಕಣ್ವ ಎಂದು ಕರೆಸಿಕೊಂಡ ಬಿ.ಎಂ.ಶ್ರೀ ಅವರು ೧೯೩೫ರಲ್ಲಿ ಗಮಕ ಕಲೆಯ ಪ್ರೊತ್ಸಾಹಕ್ಕಾಗಿ ಒಂದು ಸಾವಿರ ರೂ.ಯೊಂದಿಗೆ ಮೊದಲನೆಯ ದತ್ತಿಗೆ ಭದ್ರವಾದ ಅಡಿಪಾಯ ಹಾಕಿದರು. ಬಿ.ಎಮ್.ಟಿ.ಸಿ ಸಂಸ್ಥೆಯವರು ನೃಪತುಂಗ ಸಾಹಿತ್ಯ ಪ್ರಶಸ್ತಿ ಹಾಗೂ ಮಯೂರ ವರ್ಮ ಪ್ರಶಸ್ತಿಗಾಗಿ ಅತಿ ಹೆಚ್ಚು ೧ ಕೋಟಿ ೫೦ ಲಕ್ಷ ರೂ ದತ್ತಿ ಹಣವನ್ನು ಇಟ್ಟಿರುತ್ತಾರೆ. ವರನಟ ಡಾ. ರಾಜಕುಮಾರ್ ಅವರು ತಮಗೆ ಬಂದ ಫಾಲ್ಕೆ ಪ್ರಶಸ್ತಿಯ ಮೂಲಕ ಬಂದ ಹಣವನ್ನು ನೇರವಾಗಿ ಪರಿಷತ್ತಿಗೆ ಬಂದು ದತ್ತಿ ಇಟ್ಟಿರುವುದನ್ನು ನಾಡೋಜ.ಡಾ.ಮಹೇಶ ಜೋಶಿ ನೆನೆಸಿಕೊಂಡರು.

ಕಾರ್ಯಕ್ರಮದ ಉದ್ಘಾಟನೆ ನಡೆಸಿ ಮಾತನಾಡಿದ **ಹಿರಿಯ ವಿದ್ವಾಂಸರಾದ ನಾಡೋಜ ಡಾ. ಹಂಪ ನಾಗರಾಜಯ್ಯ ಕನ್ನಡ** ಸಾಹಿತ್ಯ ಪರಿಷತ್ತನ್ನು ಅತ್ಯಂತ ಹತ್ತಿರದಿಂದ ನೋಡುತ್ತಾ ಬಂದಿರುವ ನನಗೆ ಪರಿಷತ್ತಿನಲ್ಲಿ ಆಗುತ್ತಿರುವ ಇತ್ತೀಚಿನ ಬದಲಾವಣೆಯ ಬಗ್ಗೆ ಅತೀವ ಸಂತೋಷವಾಗುತ್ತಿದೆ. ದತ್ತಿ ಮತ್ತು ಸಾಹಿತ್ಯ ಪರಿಷತ್ತಿನ ನಡುವೆ ಸುದೀರ್ಘ ಇತಿಹಾಸವಿದೆ. ಸಾಹಿತ್ಯ ಪರಿಷತ್ತಿನ ಅಧ್ಯಕ್ಷರನ್ನು ಇಡೀ ನಾಡಿನ ಸಾಹಿತ್ಯ ಸಂಸ್ಕೃತಿಯ ವರಿಷ್ಠರು ಎಂದು ತಿಳಿದುಕೊಳ್ಳಬೇಕಾಗುತ್ತದೆ. ಇವತ್ತಿನ ದತ್ತಿ ಚಾವುಂಡರಾಯನ ಹೆಸರಿನಲ್ಲಿ ಇರುವುದು ಮಹತ್ವದ್ದು ಜೊತೆಗೆ ಈ ಕಾರ್ಯಕ್ರಮವೂ ಅರ್ಥಪೂರ್ಣ ಹಾಗೂ ಮೌಲ್ಯಿಕವಾಗಿರುವುದು ಎಂದರು.

ಪ್ರಶಸ್ತಿ ಪ್ರದಾನ ಮಾಡಿದ ಸರ್ವೋಚ್ಚನ್ಯಾಯಾಲಯದ **ವಿಶ್ರಾಂತ ನ್ಯಾಯಮೂರ್ತಿಗಳು ಹಾಗೂ ವಿಶ್ರಾಂತ** ಲೋಕಾಯುಕ್ತರು ಆಗಿರುವ ನ್ಯಾಯಮೂರ್ತಿ ಶ್ರೀ ಸಂತೋಷ ಹೆಗ್ಡೆ ಅವರು ಮಾತನಾಡಿ ಒಳ್ಳೆಯ ಕೆಲಸ ಮಾಡಿದವರಿಗೆ ಸನ್ಮಾನಿಸಿದಾಗ ಹುಮ್ಮಸ್ಸು ಬರುತ್ತದೆ ಹಾಗೆಯೇ ಮುಂದೆ ಸಾಧನೆ ಮಾಡಿದರೆ ಸಮಾಜ ನಮ್ಮನ್ನು ಗುರುತಿಸುವುದು ಎನ್ನುವ ವಿಶ್ವಾಸ ಉಂಟಾಗುತ್ತದೆ. ಸಮಾಜದಲ್ಲಿ ಅನ್ಯಾಯಗಳು ಆಗುತ್ತಿರುವುದಕ್ಕೆ ವ್ಯಕ್ತಿಗಳು ಕಾರಣವಲ್ಲ ಬದಲಾಗಿ ಈ ಸಮಾಜವೇ ಕಾರಣ. ಅಂತಸ್ತಿನ ಕನಸು ಕಾಣುವುದು ತಪ್ಪಲ್ಲ ಅದಕ್ಕೆ ಬೇರೆಯವರ ಜೇಬಿಗೆ ಕೈ ಹಾಕಿ ಅಂತಸ್ತು ಕಟ್ಟಿಕೊಳ್ಳುವುದು ಸರಿಯಲ್ಲ. ಒಳ್ಳೆಯ ಕೆಲಸ ಮಾಡಿದವರಿಗೆ ಬೆಲೆ ಇಲ್ಲವೇ ಎನ್ನುವ

ಆತಂಕ ಮೂಡುವ ಸಮಾಜದಲ್ಲಿ ನಾವು ಇದ್ದೇವೆ. ಶಾಂತಿ ಸೌಹಾರ್ದ ಇರಬೇಕು ಎಂದಾದರೆ ಸಮಾಜ ಬದಲಾಗಬೇಕು. ಇವತ್ತು ಕಾನೂನಿಗೆ ಯಾರೂ ಹೆದರುವುದಿಲ್ಲ. ತಪ್ಪು ಮಾಡಿದವರಿಗೆ ಶಿಕ್ಷೆ ಸಿಗುವದು ೩೦ - ೪೦ ವರ್ಷಗಳ ನಂತರ ಅದಕ್ಕೆ ಯಾರೂ ಹೆದರುವುದಿಲ್ಲ. ತೃಪ್ತಿ ಎನ್ನುವುದು ಇರಬೇಕು. ಮಾನವೀಯತೆ ಇದ್ದರೆ ಮಾತ್ರ ಮಾನವ ಎಂದು ಕರೆಸಿಕೊಳ್ಳಬಹುದು. "ಏನಾದರೂ ಆಗು ಮೊದಲು ಮಾನವನಾಗು" ಎಂದು ಸಿದ್ದಯ್ಯ ಪುರಾಣಿಕರು ಹೇಳಿದ್ದಾರೆ. ಹಾಗಾದಾಗ ಮಾತ್ರ ದೇಶದಲ್ಲಿ ಶಾಂತಿ ಸಮಾಧಾನ ಕಂಡು ಬರುವುದಕ್ಕೆ ಸಾಧ್ಯ ಎಂದು ಹೆಳಿದರು.

ಕನ್ನಡ ಕಾಯಕ ದತ್ತಿ ಪುರಸ್ಕೃತರಾದ ಮಹಾರಾಷ್ಟ್ರ ರಾಜ್ಯದ ಗಡಿ ಭಾಗವಾದ ಸೊಲ್ಲಾಪುರ ಜಿಲ್ಲೆಯ ಅಕ್ಕಲಕೋಟೆ ತಾಲೂಕಿನ ಪೀಠಾಧ್ಯಕ್ಷರಾದ ಪರಮಪೂಜ್ಯ **ಶ್ರೀಮನ್ ನಿರಂಜನ ಪ್ರಣವಸ್ವರೂಪಿ ಬಸವಲಿಂಗ ಮಹಾಸ್ವಾಮಿಗಳು** ಮಾತನಾಡಿ ರಾಜ್ಯದಲ್ಲಿ ಇರುವ ಎಲ್ಲಾ ಪ್ರಶಸ್ತಿಗಳಿಗಿಂತ ಗೌರವಯುಕ್ತವಾಗಿರುವುದು ಈ ದತ್ತಿ ಪ್ರಶಸ್ತಿಗಳು. ಮಿಕ್ಕ ಎಲ್ಲಾ ಪ್ರಶಸ್ತಿಗೆ ೬ ತಿಂಗಳ ತಯಾರಿ ನಡೆಸಿ ಅರ್ಜಿಗಳನ್ನು ತರಿಸಿಕೊಂಡು, ಮರ್ಜಿಯ ಆಧಾರದ ಮೇಲೆ ನಂತರ ಪ್ರಶಸ್ತಿಗಳನ್ನು ಪ್ರದಾನ ಮಾಡ್ತಾರೆ. ಆದರೆ ಪರಿಷತ್ತು ನೀಡುವ ಈ ಪ್ರಶಸ್ತಿಗಳು ಯಾವುದೇ ಮುಲಾಜು ಕಾಯುವುದಿಲ್ಲ. ನನಗೆ ಬಂದ ಪ್ರಶಸ್ತಿ ಸಮಸ್ತ ಗಡಿನಾಡ ಕನ್ನಡಿಗರಿಗೆ ಸಂದ ಗೌರವವಾಗಿದೆ. ಗಡಿಯಲ್ಲಿ ಕನ್ನಡವನ್ನು ಉಳಿಸಿ ಬೆಳೆಸುವ ಪ್ರತಿಜ್ಞೆಮಾಡಿ ಈ ಪ್ರಶಸ್ತಿ ಪಡೆದುಕೊಂಡಿದ್ದೇನೆ ಎಂದರು.

**ಚಾವುಂಡರಾಯ ದತ್ತಿ ಪ್ರಶಸ್ತಿಯನ್ನು ಹಿರಿಯ ವಿಧ್ವಾಂಸರಾದ ಶ್ರೀ ಶಾಂತಿನಾಥ ದಿಬ್ಬದ ಅವರಿಗೆ, 'ನಾಗಡಿಕೆರೆ ಕಿಟ್ಟಪ್ಪಗೌಡ ರುಕ್ಮಿಣಿ ತೀರ್ಥಹಳ್ಳಿ ದತ್ತಿ'** ಪ್ರಶಸ್ತಿಯನ್ನು **ವಿಜಯವಾಣಿ ದಿನಪತ್ರಿಕೆಯ ಸಂಪಾದಕರಾದ ಶ್ರೀ ಕೆ.ಎನ್.ಚನ್ನೇಗೌಡ** ಅವರಿಗೆ, **'ಕನ್ನಡ ಕಾಯಕ ದತ್ತಿ'** ಪ್ರಶಸ್ತಿಯನ್ನು ಕೋಲಾರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ರಾಜ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ **ಡಾ. ಶಂಕರಪ್ಪ ಅವರಿಗೆ** ಮತ್ತು ಕೊಪ್ಪಳದ ರಂಗನಿರ್ದೇಶಕರು ಹಾಗೂ ರಂಗಭೂಮಿ ಕಲಾವಿದರಾದ **ಶ್ರೀ. ಕೆ. ಇಮಾಮಸಾಬ** ಅವರಿಗೆ ದತ್ತಿ ಪ್ರಶಸ್ತಿ ಪ್ರದಾನಮಾಡಲಾಯಿತು.

ಚಾವುಂಡರಾಯ ದತ್ತಿ ಪ್ರಶಸ್ತಿಯ ದಾನಿಗಳಾದ ಶ್ರವಣಬೆಳಗೊಳದ ಶ್ರೀ ಚಾರುಕೀರ್ತಿ ಭಟ್ಟಾರಕ ಸ್ವಾಮಿಜಿಗಳ ಕಳಿಸಿದ ಸಂದೇಶವನ್ನು ಶ್ರೀ ಮುರುಳಿಧರ ವಾಚಿಸಿದರು. ಕನ್ನಡ ಸಾಹಿತ್ಯ ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ಶ್ರೀ ನೇ.ಭ ರಾಮಲಿಂಗ ಶೆಟ್ಟಿ ಅವರು ಸ್ವಾಗತಿಸಿದರು. ಗೌರವ ಕೋಶಾಧ್ಯಕ್ಷರಾದ ಶ್ರೀ ಬಿ.ಎಂ.ಪಟೇಲ್‌ಪಾಂಡು ಅವರು ಕಾರ್ಯಕ್ರಮ ನಿರೂಪಣೆ ಮಾಡಿದರು. ಗೌರವ ಕಾರ್ಯದರ್ಶಿ ಶ್ರೀ. ಕೆ. ಮಹಾಲಿಂಗಯ್ಯನವರು ವಂದಿಸಿದರು.

ಛಾಯಾಚಿತ್ರ: ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಇಂದು ನಡೆದ ದತ್ತಿ ಕಾರ್ಯಕ್ರಮದಲ್ಲಿ ಪುರಸ್ಕೃತರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಶ್ರೀನಾಥ್ ಜೆ.
ಮಾಧ್ಯಮ ಸಲಹೆಗಾರರು
ಕನ್ನಡ ಸಾಹಿತ್ಯ ಪರಿಷತ್ತು ಬೆಂಗಳೂರು.